ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಮಂಗಳವಾರ, ದಿನಾಂಕ : 24 ನೇ ಮಾರ್ಚ್, 2020

ತುಮಕೂರು ಹಾಲು ಒಕ್ಕೂಟ ಬೆಂಗಳೂರು ಮಾರುಕಟ್ಟೆಯಲ್ಲಿ ನಂದಿನಿ ಮಳಿಗೆಗಳ ಸ್ಥಾಪನೆ

ಶ್ರೀ ಹೆಚ್.ಎಂ.ರಮೇಶ ಗೌಡ(ವಿಧಾನಸಭೆಯಿಂದ ಚುನಾಯಿತರಾದವರು):-

1550 (1818) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ತುಮಕೂರು ಹಾಲು ಉತ್ಪಾದಕರ ಒಕ್ಕೂಟ ಬೆಂಗಳೂರು ವ್ಯಾಪ್ತಿಯಲ್ಲಿ ನಂದಿನಿ ಮಳಿಗೆ ಮತ್ತು ಹಾಲು ಮಾರಾಟ ಮಾಡಲು ಅನುಮತಿ ನೀಡಲು ವಿಳಂಬ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರಿಪಡಿಸಲು ಯಾವ ಕ್ರಮ ಕೈಗೊಂಡಿದೆ;

(ಆ) ನಂದಿನಿ ಮಳಿಗೆ ಪ್ರಾರಂಭ ಮಾಡಲು ಇರುವ ಆರಂಭಿಕ ಠೇವಣಿಯನ್ನು ಕೆನರಾ ಬ್ಯಾಂಕ್‌ನಲ್ಲಿಯೇ ಇಡಬೇಕು ಎಂಬ ನಿಯಮವನ್ನು ಅನುಸರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಕಳೆದ 3 ವರ್ಷಗಳಲ್ಲಿ ತುಮಕೂರು ಹಾಲು ಒಕ್ಕೂಟದಿಂದ ಎಷ್ಟು ನಂದಿನಿ ಮಳಿಗೆಗಳನ್ನು ಪ್ರಾರಂಭಿಸಲಾಗಿದೆ; (ಸಂಪೂರ್ಣ ಮಾಹಿತಿ ನೀಡುವುದು)

(ಈ) ನಂದಿನಿ ಹಾಲು ಮಾರಾಟ ಕೇಂದ್ರಗಳನ್ನು ಸ್ಥಾಪಿಸಲು ಇರುವ ಮಾನದಂಡಗಳೇನು;

(ಉ) ನಂದಿನಿ ಮಳಿಗೆಯನ್ನು ಸ್ಥಾಪಿಸಲು ನಿರುದ್ಯೋಗ ಯುವಕರಿಗೆ ಸರ್ಕಾರದಿಂದ ಸಹಾಯ ಧನ ಏನಾದರೂ ದೊರಕುತ್ತಿದೆಯೇ?